# ಗೃಹರಕ್ಷಕ ಸ್ಥಾನ ಭರ್ತಿಗೆ ಅರ್ಜಿ ಆಹ್ವಾನ

ಕಾರವಾರ: ಜಿಲ್ಲಾ ಗೃಹರಕ್ಷಕದಳದಲ್ಲಿ ಖಾಲಿ ಇರುವ 89 ಸ್ವಯಂ ಸೇವಕ ಗೃಹರಕ್ಷಕ, ಗೃಹರಕ್ಷಕಿಯರ ಸ್ಥಾನಗಳಿಗೆ ನೋಂದಣಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಕೆಗೆ ಮಾರ್ಚ್ 10 ಕೊನೆಯ ದಿನವಾಗಿದೆ. ಇಲ್ಲಿನ ಸರ್ವೋದಯ ನಗರದಲ್ಲಿರುವ ಜಿಲ್ಲಾ ಗೃಹ ರಕ್ಷಕದಳದ ಕಚೇರಿಯಲ್ಲಿ ಅರ್ಜಿ ವಿತರಣೆ ಮಾಡಲಾಗುತ್ತಿದೆ. ಕನಿಷ್ಠ 10ನೇ ತರಗತಿ ವ್ಯಾಸಂಗ ಮಾಡಿರುವ, 19ರಿಂದ 50 ವರ್ಷ ವಯಸ್ಸಿನವರು ಅರ್ಜಿ ಸಲ್ಲಿಸಬಹುದು.

ಅಗತ್ಯ ಮಾಹಿತಿಗೆ ಜಿಲ್ಲಾ ಗೃಹರಕ್ಷ-ದಳದ ಕಚೇರಿ (08382 200137), ಗೃಹರಕ್ಷಕದಳದ ಜಿಲ್ಲಾ ಬೋಧಕ ರಘು ಬಿ.ಸಿ (9880573509) ಅವರನ್ನು ಸಂಪರ್ಕಿಸಬಹುದು ಎಂದು ಗೃಹರಕ್ಷಕ ದಳದ ಸಮಾದೇಷ್ಟರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Publication Date
11/02/2026
Presented by ಪ್ರಜಾವಾಣಿ